**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೊಂದನೆಯ ಅಧಿವೇಶನ**

# ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023

**(2023ರ ವಿಧಾನಸಭೆಯ ವಿಧೇಯಕ ಸಂಖ್ಯೆ–16)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾನ್ನಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ಸೆಪ್ಟಂಬರ್ 16ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 160ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ 14) 160ನೇ ಪ್ರಕರಣದಲ್ಲಿನ ಮೊದಲನೇ ಪರಂತುಕದಲ್ಲಿರುವ "ಚಿಕ್ಕಮಗಳೂರು" ಎಂಬ ಪದದ ಮೊದಲು "ಶಿವಮೊಗ್ಗ(ಭದ್ರಾವತಿ, ಶಿವಮೊಗ್ಗ ಮತ್ತು ಶಿಕಾರಿಪುರ ತಾಲ್ಲೂಕುಗಳನ್ನು ಹೊರತುಪಡಿಸಿ)" ಎಂಬ ಪದಗಳು, ಆವರಣ ಚಿಹ್ನೆಗಳು ಹಾಗೂ ಉದ್ಧರಣ ಚಿಹ್ನೆಗಳನ್ನು ಸೇರಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 03)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಕರ್ನಾಟಕದ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ.20426/2021ರಲ್ಲಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ, ಶಿವಮೊಗ್ಗ ಮತ್ತು ಶಿಕಾರಿಪುರ ತಾಲ್ಲೂಕುಗಳನ್ನು ಹೊರತುಪಡಿಸಿ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಅವುಗಳ ಜನಸಂಖ್ಯೆಯ ಅನುಪಾತದಲ್ಲಿ ಚುನಾವಣೆಗಾಗಿ ಜನಸಂಖ್ಯೆಯ ಮಿತಿಯನ್ನು ನಿಯಮಿಸಿ, ಕಾಲಮಿತಿಯೊಳಗೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆಯನ್ನು ನಡೆಸಲು ನಿರ್ದೇಶಿಸಿರುವುದನ್ನು ಪಾಲಿಸುವುದಕ್ಕಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ 03)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ

.

# ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಹೆಚ್ಚಿನ ಆರ್ಥಿಕ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಮತ್ತು ನಡವಳಿಕೆ ನಿಯಮಗಳ 77ನೇ ನಿಯಮದ (1)ನೇ ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.**

ಕರ್ನಾಟಕದ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ.20426/2021ರಲ್ಲಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ, ಶಿವಮೊಗ್ಗ ಮತ್ತು ಶಿಕಾರಿಪುರ ತಾಲ್ಲೂಕುಗಳನ್ನು ಹೊರತುಪಡಿಸಿ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಅವುಗಳ ಜನಸಂಖ್ಯೆಯ ಅನುಪಾತದಲ್ಲಿ ಚುನಾವಣೆಗಾಗಿ ಜನಸಂಖ್ಯೆಯ ಮಿತಿಯನ್ನು ನಿಯಮಿಸಿ, ಕಾಲಮಿತಿಯಯೊಳಗೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆಯನ್ನು ನಡೆಸಲು ನಿರ್ದೇಶಿಸಿರುವುದನ್ನು ಪಾಲಿಸುವುದಕ್ಕಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ 03)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

**ಪ್ರಿಯಾಂಕ ಖರ್ಗೆ**
ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993

## (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಉದ್ಧೃತಭಾಗ

**X X XX XX**

**160. ಚುನಾಯಿತ ಸದಸ್ಯರು.-** ಜಿಲ್ಲಾ ಪಂಚಾಯತಿಯ ಚುನಾಯಿತ ಸದಸ್ಯರಲ್ಲಿ ಜಿಲ್ಲೆಯ ತಾಲೂಕುಗಳಿಂದ ಚುನಾಯಿತರಾದ ಇಪ್ಪತ್ತೈದಕ್ಕಿಂತಲೂ ಕಡಿಮೆಯಲ್ಲದಂತೆ ವ್ಯಕ್ತಿಗಳಿರತಕ್ಕದ್ದು, ಪ್ರತಿಯೊಂದು ತಾಲೂಕಿನಿಂದ ಚುನಾಯಿತರಾಗತಕ್ಕ ಸದಸ್ಯರ ಸಂಖ್ಯೆಯನ್ನು ಮೂವತ್ತೈದು ಸಾವಿರ ಮತ್ತು ನಲವತ್ತೈದು ಸಾವಿರದ ಜನಸಂಖ್ಯೆಯ ನಡುವಣ ಪ್ರತಿಯೊಂದು ಜನಸಂಖ್ಯೆಗೆ ಅಥವಾ ಅದರ ಭಾಗಕ್ಕೆ ಒಬ್ಬ ಸದಸ್ಯನಂತೆ ಸರ್ಕಾರದಿಂದ ನಿಗದಿಪಡಿಸಲಾಗಿದೆ:

ಪರಂತು, ಚಿಕ್ಕಮಗಳೂರು (ತರೀಕೆರೆ, ಕಡೂರು, ಅಜ್ಜಂಪುರ ತಾಲ್ಲೂಕುಗಳನ್ನು ಹೊರತುಪಡಿಸಿ), ಉತ್ತರ ಕನ್ನಡ ಮತ್ತು ಕೊಡಗು ಜಿಲ್ಲೆಗಳ ಸಂದರ್ಭದಲ್ಲಿ ಪ್ರತಿ ಹದಿನೆಂಟು ಸಾವಿರದಿಂದ ಇಪ್ಪತ್ತೈದು ಸಾವಿರದ ನಡುವಣ ಗ್ರಾಮೀಣ ಜನಸಂಖ್ಯೆಗೆ ಅಥವಾ ಅದರ ಭಾಗಕ್ಕೆ ಒಬ್ಬ ಸದಸ್ಯನಿರತಕ್ಕದ್ದು.

ಮತ್ತು ಪರಂತು, ಏಳು ಲಕ್ಷಕ್ಕಿಂತ ಹೆಚ್ಚಿನ ಆದರೆ ಒಂಬತ್ತು ಲಕ್ಷದ ಐವತ್ತು ಸಾವಿರವನ್ನು ಮೀರಿರದ ಗ್ರಾಮೀಣ ಜನಸಂಖ್ಯೆಯನ್ನು ಹೊಂದಿರುವ ಜಿಲ್ಲೆಯ ಸಂದರ್ಭದಲ್ಲಿ ಇಪ್ಪತ್ತೆಂಟು ಚುನಾಯಿತ ಸದಸ್ಯರಿರತಕ್ಕದ್ದು.

**X X XX XX**

ಸರ್ಕಾರಿ ಮುದ್ರಣಾಲಯ, ಸುವರ್ಣ ವಿಧಾನಸೌಧ, ಬೆಳಗಾವಿ, ಪಿ7, ಕಾಸೂ , ಪ್ರತಿಗಳು 300, 11ನೇ ಡಿಸೆಂಬರ್ 2023

**KARNATAKA LEGISLATIVE COUNCIL**
**ONE HUNDRED AND FIFTY FIRST SESSION**

# THE KARNATAKA GRAM SWARAJ AND PANCHAYAT RAJ (AMENDMENT) BILL, 2023

**(LA Bill No. 16 of 2023)**

**(As passed by the Karnataka Legislative Assembly)**

A Bill further to amend the Karnataka Gram Swaraj and Panchayat Raj Act, 1993 (Karnataka Act 14 of 1993).

Whereas, it is expedient further to amend the Karnataka Gram Swaraj and Panchayat Raj Act, 1993 (Karnataka Act 14 of 1993) for the purposes hereinafter appearing;

Be it enacted by the Karnataka State Legislature in the seventy fourth year of the Republic of India, as follows:-

**1. Short title and commencement.-** (1) This Act may be called the Karnataka Gram Swaraj and Panchayat Raj (Amendment) Act, 2023.

(2) It shall be deemed to have come into force with effect from 16th day of September, 2023.

**2. Amendment of section 160.-** In the Karnataka Gram Swaraj and Panchayat Raj Act, 1993 (Karnataka Act 14 of 1993) in section 160, in the first proviso, before the word "Chikkamagalur" the words, brackets and punctuation "Shivamogga (excluding Bhadravati, Shivamogga and Shikaripura Taluks)," shall be inserted.

**3. Repeal and savings.-** (1) The Karnataka Gram Swaraj and Panchayat Raj (Amendment) Ordinance, 2023 (Karnataka Ordinance 03 of 2023) is hereby repealed.

(2) Notwithstanding such repeal, anything done or any action taken under the Principal Act, as amended by the said Ordinance, shall be deemed to have been done or taken under the Principal Act, as amended by this Act.

## STATEMENT OF OBJECTS AND REASONS

**(As appended to at the time of Introduction)**

It is considered necessary to amend the Karnataka Gram Swaraj Panchayath Raj Act, 1993 (Karnataka Act 14 of 1993) to comply with the direction of the Hon'ble High Court of Karnataka in the writ petition No.20426/2021 to conduct the election to the rural local bodies within the time limit by prescribing population limit for election to the Taluk Panchayat and zilla panchayat by excluding Bhadravathi, shivamogga and shikaripura taluk of shivamoga district in proportion to their population

As the matter was urgent and both Houses of the State Legislature were not in a session, the Karnataka Gram Swaraj and Panchayat Raj (Amendment) Ordinance, 2023 (Karnataka Ordinance 03 of 2023) was promulgated to achieve the above object.

This Bill seeks to replace the said Ordinance.

Hence the Bill.

## FINANCIAL MEMORANDUM

There is no extra expenditure involved in the proposed legislative measure.

**EXPLANATORY STATEMENT AS REQUIRED BY SUB-RULE (1) OF RULE 77 OF THE RULES OF PROCEDURE AND CONDUCT OF BUSINESS IN THE KARNATAKA LEGISLATIVE COUNCIL.**

It is considered necessary to amend the Karnataka Gram Swaraj Panchayath Raj Act, 1993 (Karnataka Act 14 of 1993) to comply with the direction of the Hon'ble High Court of Karnataka in the writ petition No.20426/2021 to conduct the election to the rural local bodies within the time limit by prescribing population limit for election to the Taluk Panchayat and zilla panchayat by excluding Bhadravathi, shivamogga and shikaripura taluk of shivamoga district in proportion to their population

As the matter was urgent and both Houses of the State Legislature were not in a session, the Karnataka Gram Swaraj and Panchayat Raj (Amendment) Ordinance, 2023 (Karnataka Ordinance 03 of 2023) was promulgated to achieve the above object.

This Bill seeks to replace the said Ordinance.

**PRIYANK KHARGE**
Minister for Rural Development and
Panchayat Raj and Information Technology
and Bio Technology

**K.R. MAHALAKSHMI**
Secretary
Karnataka Legislative Council

# ANNEXURE

## EXTRACT FROM THE KARNATAKA GRAM SWARAJ AND PANCHAYAT RAJ ACT, 1993 (KARNATAKA ACT 14 OF 1993).

**XX** **XX** **XX**

**160. Elected members.-** The elected members of the Zilla Panchayat shall consist of not less than twenty five members elected from the Taluks in the district, the number of members to be elected from each Taluk being fixed by the Government in accordance with the scale of one member for every population between thirty five thousand and forty-five thousand or part thereof of the population :

Provided that, in case of Chikkamagalur (excluding Tarikere, Kaduru, Ajjampura Taluks) Uttara Kannada and Kodagu Districts it shall be one member for every rural population between eighteen thousand to twenty five thousand or part thereof

Provided further that, in case of a district having rural population of more than seven lakhs but not more than nine lakhs fifty thousand there shall be twenty eight elected members.

**XX** **XX** **XX**

Govt. Press, Suvarna Vidhana Soudha, Belgavi, 11th Dec, 2023, P7, W.D. , Copies 300